RNU AIR DHARWAD

**APRIL 09, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

<><><><>

**ಮುಖ್ಯಾಂಶಗಳು:**

- **ದಾವಣಗೆರೆ ಹಾಗೂ ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ಮತದಾನ ಆರಂಭ.**

- **ಕಂದಾಯ ಇಲಾಖೆ ಅಧಿಕಾರಿಗಳು ತಮ್ಮ ಹಂತದಲ್ಲಿಯೇ ಜನರ ಸಮಸ್ಯೆಗಳನ್ನು ಬಗೆಹರಿಸಬೇಕು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೂಚನೆ.**

- **ರಾಜ್ಯದಲ್ಲಿ ಪ್ರತ್ಯೇಕ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ  ಸಚಿವಾಲಯ ಸ್ಥಾಪನೆಗೆ ಸರ್ಕಾರದ ನಿರ್ಧಾರ.**

- **ಪ್ರಸಕ್ತ ಸಾಲಿನ ಪಿಯುಸಿ ಪರೀಕ್ಷೆ–1ರ ಫಲಿತಾಂಶ, ಇಂದು ಮಧ್ಯಾಹ್ನ 3 ಗಂಟೆಗೆ ಪ್ರಕಟ.**

ವಾರ್ತೆಗಳ ವಿವರ...

**ದಾವಣಗೆರೆ ಹಾಗೂ ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ಮತದಾನ** ಆರಂಭಗೊಂಡಿದೆ. ದಾವಣಗೆರೆ ವಿಧಾನಸಭಾ ಉಪ ಚುನಾವಣೆ ಮತದಾನಕ್ಕಾಗಿ ಜಿಲ್ಲಾಡಳಿತ ಎಲ್ಲ ಅಗತ್ಯ ಸಿದ್ಧತೆಗಳನ್ನೂ ಮಾಡಿಕೊಂಡಿದೆ. ಮತದಾನಕ್ಕಾಗಿ 284 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು,  ನಗರ ವ್ಯಾಪ್ತಿಯಲ್ಲಿ 234 ಮತ್ತು ಗ್ರಾಮೀಣ ವ್ಯಾಪ್ತಿಯಲ್ಲಿ 50 ಮತಗಟ್ಟೆಗಳು ಸೇರಿವೆ. ಪ್ರತಿ ಮತಗಟ್ಟೆಯಲ್ಲಿ ಕಾಯ್ದಿರಿಸಿದ ಕೊಠಡಿ, ಕುಡಿಯುವ ನೀರು, ರ್‍ಯಾಂಪ್ ವ್ಯವಸ್ಥೆ, ಶೌಚಾಲಯ, ನೆರಳು ಮತ್ತು ಕ್ಯೂ ಮ್ಯಾನೇಜ್ಮೆಂಟ್, ಫೀಡಿಂಗ್ ಕೊಠಡಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. 229 ಮಂದಿ ಹಿರಿಯ ನಾಗರಿಕರು ಮತ್ತು ವಿಕಲಚೇತನರು ಅಂಚೆ ಪತ್ರದ ಮೂಲಕ ಮನೆಯಿಂದಲೇ ಮತದಾನ ಮಾಡುವ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

<><><>

**ಕಂದಾಯ ಇಲಾಖೆ ಅಧಿಕಾರಿಗಳು ತಮ್ಮ ಹಂತದಲ್ಲಿಯೇ ಜನರ ಸಮಸ್ಯೆಗಳನ್ನು** ಬಗೆಹರಿಸಬೇಕು ಎಂದು ಗೃಹ ಖಾತೆ ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ಸೂಚಿಸಿದ್ದಾರೆ. ತುಮಕೂರಿನಲ್ಲಿ ನಡೆದ ಜಿಲ್ಲಾ ಉಸ್ತುವಾರಿ ಸಚಿವರ ಜನತಾದರ್ಶನದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕಂದಾಯ ಇಲಾಖೆಯ ಬಗ್ಗೆ ಸಾಕ  ್ಟ ದೂರುಗಳು ಬಂದಿದ್ದು, ಹೈಕೋರ್ಟ್ ಆದೇಶವನ್ನು ಕಂದಾಯ ಅಧಿಕಾರಿಗಳು ಪಾಲಿಸುತ್ತಿಲ್ಲ ಎಂದರೆ ಹೇಗೆ? ಎಂದು ಪ್ರಶ್ನಿಸಿದರು. ಅಧಿಕಾರಿಗಳು ಜನರನ್ನು ಸುಮ್ಮನೆ ಕಚೇರಿಗೆ ಅಲೆದಾಡಿಸುವುದನ್ನು ಬಿಟ್ಟು, ಜನರ ಸಮಸ್ಯೆಗಳಿಗೆ ಪರಿಹಾರವನ್ನು ಒದಗಿಸಬೇಕು, ತಹಶೀಲ್ದಾರ್ ಹಂತದಲ್ಲಿ ಬಗೆಹರಿಸಬಹುದಾದ ಸಮಸ್ಯೆಗಳೊಂದಿಗೆ ಜನರು ಜಿಲ್ಲಾ ಮಟ್ಟಕ್ಕೆ ಬಂದಿದ್ದಾರೆ ಅಂದರೆ ಕಂದಾಯ ಅಧಿಕಾರಿಗಳು ಸರಿಯಾಗಿ ಕೆಲಸ ಮಾಡುತ್ತಿಲ್ಲ ಎನ್ನುವುದು ತಿಳಿದು ಬರುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಸೌಲಭ್ಯ ಪಡೆದವರಿಗೆ ಹಕ್ಕುಪತ್ರಗಳನ್ನು, ಆದೇಶ ಪತ್ರಗಳನ್ನು ವಿತರಿಸಲಾಯಿತು.

<><><>

**ಬಾಹ್ಯಾಕಾಶಕ್ಕೆ ಸಂಬಂಧಿಸಿದ ಸಂಶೋಧನೆ ಎಂದಿಗೂ ಒಂದು ಸವಾಲು. ಈ** ನಿಟ್ಟಿನಲ್ಲಿ ಅಮೆರಿಕಾ ಮಾನವಸಹಿತ ಚಂದ್ರಯಾನಕ್ಕೆ ಸಿದ್ಧತೆ ನಡೆಸುತ್ತಿದ್ದು, ಮುಂದಿನ ದಿನಗಳಲ್ಲಿ ಚಂದ್ರನ ಮೇಲೆ ಹೆಜ್ಜೆ ಇಡುವ ಪ್ರಯತ್ನ ಮಾಡಲಾಗುತ್ತಿದೆ. ಈ ನಿಟ್ಟಿನಲ್ಲಿ, ಭಾರತವೂ ಸಹ, ಮಾನವಸಹಿತ ಚಂದ್ರಯಾನಕ್ಕೆ ಸಿದ್ಧತೆ ನಡೆಸುತ್ತಿದೆ ಎಂದು ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್.ಕಿರಣಕುಮಾರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ **ಬಾಹ್ಯಾಕಾಶ ನೌಕೆ ಕಾರ್ಯಾಚರಣೆಗಳ** ಕುರಿತ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಅವರು ಮಾತನಾಡಿದರು. ಇದೇ ವೇಳೆ, ಇಸ್ರೋ ಮಾಜಿ ಅಧ್ಯಕ್ಷ ಡಾಕ್ಟರ್ ಎಸ್.ಸೋಮನಾಥ, ವಸ್ತು ಪ್ರದರ್ಶನ ಉದ್ಘಾಟಿಸಿದರು. ಇಸ್ರೋ ಉಪ ನಿರ್ದೇಶಕರಾದ ನಂದಿನಿ ಹಿರೇಮಠ ಮಾತನಾಡಿ; ಬಾಹ್ಯಾಕಾಶ ಕಾರ್ಯಕ್ರಮಗಳ ಕುರಿತು ಸಮಗ್ರ ಮಾಹಿತಿ ಒದಗಿಸಲು, ವೆಬ್‌ಸೈಟ್ ಅಭಿವೃದ್ಧಿಪಡಿಸಲಾಗಿದೆ. ಅದರಲ್ಲಿ ಇತ್ತೀಚಿನ ತಂತ್ರಜ್ಞಾನದಲ್ಲಾದ ಬದಲಾವಣೆಗಳು, ಹೊಸ ಆವಿಷ್ಕಾರಗಳ ಬಗ್ಗೆ ತಿಳಿಸಲಾಗಿದೆ ಎಂದರು.

<><><>

**ಕಳೆದ ಹಣಕಾಸು ವರ್ಷದಲ್ಲಿ ದೇಶ; 55** ಗಿಗಾವ್ಯಾಟ್‌ಗಿಂತ ಹೆಚ್ಚಿನ ಪಳಿಯುಳಿಕೇತರ ಇಂಧನ ಸಾಮರ್ಥ್ಯ ಹೊಂದಿದೆ ಎಂದು, ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ದೆಹಲಿಯಲ್ಲಿ 2025–26ರ ನವೀಕರಿಸಬಹುದಾದ ಇಂಧನ ವಲಯದ ಸಾಧನೆ ಕುರಿತು ಮಾಹಿತಿ ನೀಡಿದ ಅವರು, ಇಲ್ಲಿಯವರೆಗೆ ಪಳಿಯುಳಿಕೇತರ ಇಂಧನ ಮೂಲಗಳಿಂದ 283 ಗಿಗಾವ್ಯಾಟ್‌ಗಿಂತ ಹೆಚ್ಚಿನ ಸಾಮರ್ಥ್ಯ ಹೊಂದಲಾಗಿದೆ. ನವೀಕರಿಸಬಹುದಾದ ಇಂಧನ ಸ್ಥಾಪಿತ ಸಾಮರ್ಥ್ಯದಲ್ಲಿ ಭಾರತ ಜಾಗತಿಕ ಮಟ್ಟದಲ್ಲಿ, 3ನೇ ಸ್ಥಾನದಲ್ಲಿದೆ ಎಂದು ತಿಳಿಸಿದ್ದಾರೆ. ದೇಶದಲ್ಲಿ ಸ್ಥಾಪಿತ ಸೌರಸಾಮರ್ಥ್ಯ 150 ಗಿಗಾವ್ಯಾಟ್ ಮೀರಿದ್ದು, ಕಳೆದ ಹಣಕಾಸು ವರ್ಷವೊಂದರಲ್ಲೇ 45 ಗಿಗಾವ್ಯಾಟ್‌ಗಳ ಅತ್ಯಧಿಕ ವಾರ್ಷಿಕ ಸೌರಸಾಮರ್ಥ್ಯ ಸೇರ್ಪಡೆಯಾಗಿದೆ. ಇದು 2024–25ರಲ್ಲಿ ಸುಮಾರು 23 ಗಿಗಾವ್ಯಾಟ್‌ಗಳ ಹಿಂದಿನ ದಾಖಲೆಗಿಂತ ದುಪ್ಪಟ್ಟಾಗಿದೆ ಎಂದು ಹೇಳಿದ್ದಾರೆ. 2030ರ ಗುರಿಗಿಂತ 5 ವರ್ಷಗಳ ಮುಂಚಿತವಾಗಿಯೇ ಕಳೆದ ವರ್ಷ ಜೂನ್‌ನಲ್ಲಿ, ಭಾರತ ಪಳಿಯುಳಿಕೇತರ ಇಂಧನ ಮೂಲಗಳಲ್ಲಿ ನಿಗದಿತ ಗುರಿಗಿಂತ ಶೇಕಡ 50ರಷ್ಟು ಸಾಧನೆ ಮಾಡಿದೆ ಎಂದು ತಿಳಿಸಿದ್ದಾರೆ.

<><><>

**ಎಫ್‌ಕೆಸಿಸಿಐ ಮತ್ತು ಕಾಸ್ಸಿಯಾ ಸಂಸ್ಥೆಗಳ ಅನಿಸಿಕೆಯಂತೆ ಕರ್ನಾಟಕದಲ್ಲಿ ಪ್ರತ್ಯೇಕ** MSME - ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಸಚಿವಾಲಯ ಸ್ಥಾಪಿಸುವ ಬಗ್ಗೆ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಘೋಷಣೆ ಮಾಡಿದ್ದಾರೆ ಎಂದು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರಾದ ಶರಣಬಸಪ್ಪ ದರ್ಶನಾಪುರ ಹೇಳಿದ್ದಾರೆ. ಕಲಬುರಗಿ ವಿಭಾಗ ಮಟದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ದಿಮೆಗಳ ಪಾಲುದಾರರ ಸಮಾಲೋಚನ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ನಮ್ಮ ಸರ್ಕಾರದ ಉದ್ದೇಶ ಕೇವಲ ಬೆಂಗಳೂರಿಗೆ ಸೀಮಿತವಾಗಿರದೆ, ಕಲ್ಯಾಣ ಕರ್ನಾಟಕ, ಮುಂಬೈ ಕರ್ನಾಟಕ ಮತ್ತು ಹುಬ್ಬಳ್ಳಿ–ಧಾರವಾಡ ಭಾಗಗಳಲ್ಲಿಯೂ ಕೈಗಾರಿಕೆಗಳನ್ನು ಪ್ರೋತ್ಸಾಹಿಸುವುದಾಗಿದೆ. ಈ ಹಿಂದೆ ಉತ್ತರ ಕರ್ನಾಟಕದಲ್ಲಿ ನೀರಿನ ಸಮಸ್ಯೆ ಇತ್ತು, ಆದರೆ ಇಂದು ಪರಿಸ್ಥಿತಿ ಬದಲಾಗಿದೆ. ನಮ್ಮ ಭಾಗದ ಉದ್ದಿಮೆದಾರರು ಬೆಂಗಳೂರಿಗೆ ಹೋಗಿ ಬಂಡವಾಳ ಹೂಡುವ ಬದಲು ಇಲ್ಲೇ ಕೈಗಾರಿಕೆಗಳನ್ನು ಸ್ಥಾಪಿಸುವಂತಾಗಬೇಕು ಎಂದು ತಿಳಿಸಿದರು. ಹೊಸ ಕೈಗಾರಿಕಾ ನೀತಿಯಲ್ಲಿ ಈ ಭಾಗದ ಜಿಲ್ಲೆಗಳಿಗೆ ಮತ್ತು ನಂಜುಂಡಪ್ಪ ವರದಿಯನ್ವಯ ಹಿಂದುಳಿದ ತಾಲೂಕುಗಳಿಗೆ ಹೆಚ್ಚಿನ ಸವಲತ್ತುಗಳನ್ನು ನೀಡುವತ್ತ ಸರ್ಕಾರ ಗಮನ ಹರಿಸಿದೆ. ಉದ್ಯಮಿಗಳೊಂದಿಗೆ ಚರ್ಚಿಸಿ ಶೀಘ್ರದಲ್ಲೇ ಹೊಸ MSME ಪಾಲಿಸಿಯನ್ನು ಜಾರಿಗೆ ತರಲಾಗುವುದು ಎಂದರು.

<><><>

**ಪ್ರಸಕ್ತ ಸಾಲಿನ ಪಿಯುಸಿ ಪರೀಕ್ಷೆ–1ರ ಫಲಿತಾಂಶ, ಇಂದು** ಮಧ್ಯಾಹ್ನ 3 ಗಂಟೆಗೆ ಪ್ರಕಟವಾಗಲಿದೆ ಎಂದು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ತಿಳಿಸಿದೆ. ಫಲಿತಾಂಶವನ್ನು https://karresults.nic.in ಹಾಗೂ karnatakaOne Mobile App ಮೂಲಕವೂ ಪಡೆಯಬಹುದಾಗಿದೆ. ಅಲ್ಲದೇ, ವಿದ್ಯಾರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ ವ್ಯಾಟ್ಸ್‌ಆ್ಯಪ್ ಅಥವಾ ಎಸ್.ಎಂ.ಎಸ್. ಮೂಲಕವೂ ಮಂಡಳಿಯಿಂದ ಫಲಿತಾಂಶ ರವಾನಿಸಲಾಗುವುದು ಎಂದು ತಿಳಿಸಿದೆ. ಈ ವರ್ಷ ಪ್ರಥಮ ಬಾರಿಗೆ, ವಿಶೇಷವಾಗಿ ವಿದ್ಯಾರ್ಥಿಗಳ ಫಲಿತಾಂಶದ ಅಂಕಪಟ್ಟಿ ಡಿಜಿ ಲಾಕರ್ ಮೂಲಕ, ಮಧ್ಯಾಹ್ನ 3 ಗಂಟೆಯೊಳಗೆ ಲಭ್ಯವಾಗಲಿದೆ. ಈ ಕುರಿತು https://www.digilocker.gov.in ಬಳಸಿ, ಅಂಕಪಟ್ಟಿ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು, ಮಾಹಿತಿ ನೀಡಿದೆ. ಸಂಬಂಧಿಸಿದ ಕಾಲೇಜುಗಳಲ್ಲಿ ನಾಳೆ ಮಧ್ಯಾಹ್ನ ಫಲಿತಾಂಶ ಲಭ್ಯವಿರಲಿದೆ ಎಂದು, ಪ್ರಕಟಣೆ ತಿಳಿಸಿದೆ.

<><><>

**ರಾಜ್ಯದ ವಿವಿಧ ಆಟೋ ಗ್ಯಾಸ್ ಬಂಕ್‌ಗಳಲ್ಲಿ ಅನಿಲದ ದಾಸ್ತಾನು ಕೊರತೆಯಿದೆ** ಎಂಬ ತಪ್ಪು ಮಾಹಿತಿಯ ಆಧಾರದ ಮೇಲೆ, ಕಳೆದ ಕೆಲವು ದಿನಗಳಿಂದ ಆಟೋ ಮಾಲೀಕರು ಮತ್ತು ಚಾಲಕರು ಬಂಕ್‌ಗಳ ಮುಂದೆ ಸುದೀರ್ಘ ಸರತಿ ಸಾಲಿನಲ್ಲಿ ನಿಲ್ಲುತ್ತಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆ. ಈ ಕುರಿತು ಕೆಲವು ಮಾಧ್ಯಮಗಳಲ್ಲಿ ಪ್ರಕಟವಾಗಿರುವ ವರದಿಗಳು ಕೇವಲ ವದಂತಿಗಳಾಗಿದ್ದು, ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಸ್ಪ ್ಟಪಡಿಸಿದೆ. ಕೆಲವು ಖಾಸಗಿ ಆಟೋ ಗ್ಯಾಸ್ ಸರಬರಾಜು ಸಂಸ್ಥೆಗಳಲ್ಲಿ ಮಾತ್ರ ಅಲ್ಪಮಟ್ಟಿನ ಕೊರತೆ ಕಂಡುಬಂದಿದ್ದು, ಇದನ್ನು ಸರಿಪಡಿಸಲು ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳಾದ IOC (ಇಂಡಿಯನ್ ಆಯಿಲ್), BPC (ಭಾರತ್ ಪೆಟ್ರೋಲಿಯಂ) ಮತ್ತು HPC (ಹಿಂದೂಸ್ತಾನ್ ಪೆಟ್ರೋಲಿಯಂ) ಮೂಲಕ ಹೆಚ್ಚಿನ ಪ್ರಮಾಣದ ಅನಿಲವನ್ನು ಪೂರೈಕೆ ಮಾಡಲಾಗುತ್ತಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

<><><>

**ಕೇಂದ್ರ ಪುರಸ್ಕೃತ ಜಲಜೀವನ್ ಮಿ ್ನ್ 2.0 ಯೋಜನೆಯನ್ನು 2028 ನೇ ಸಾಲಿನ** ವರೆಗೂ ವಿಸ್ತರಿಸುವ ಹಿನ್ನೆಲೆ ಯೋಜನೆಯ ಪ್ರಗತಿ ಮತ್ತು ಪರಿಣಾಮಕಾರಿ ಅನು ್ಠಾನ ಕುರಿತು ಸಂಸದರಾದ ಯದುವೀರ್ ಕೃ ್ಣದತ್ತ ಚಾಮರಾಜ ಒಡೆಯರ್ ಅವರ ಅಧ್ಯಕ್ಷತೆಯಲ್ಲಿ ಮಡಿಕೇರಿಯಲ್ಲಿ ಸಭೆ ನಡೆಯಿತು. ಜಲಜೀವನ್ ಮಿ ್ನ್ ಯೋಜನೆಯ ಜೊತೆಗೆ ಜಲ ಮಹೋತ್ಸವ ಸೇರಿದಂತೆ ಹಲವು ಕಾರ್ಯಕ್ರಮ ಹಮ್ಮಿಕೊಳ್ಳಲು ಸರ್ಕಾರದಿಂದ ಅನುಮತಿ ದೊರೆತಿದ್ದು, ಆ ನಿಟ್ಟಿನಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವಂತೆ ಸಂಸದರು ಸೂಚಿಸಿದರು. ಕೇಂದ್ರ ಪುರಸ್ಕೃತ ಜಲ ಜೀವನ್ ಮಿ ್ನ್ 2.0 ಯೋಜನೆಯನ್ನು ಸಮರ್ಪಕವಾಗಿ ಅನು ್ಠಾನಗೊಳಿಸಬೇಕು. ಯಾವುದೇ ಕಾರಣಕ್ಕೂ ಲೋಪ ಉಂಟಾಗದಂತೆ ಎಚ್ಚರ ವಹಿಸುವಂತೆ ಸಂಸದರು ನಿರ್ದೇಶನ ನೀಡಿದರು.

<><><>

**ಬೇಸಿಗೆ ಆರಂಭವಾಗಿರುವ ಹಿನ್ನೆಲೆಯಲ್ಲಿ ವಿಜಯನಗರ ಜಿಲ್ಲೆಯಾದ್ಯಂತ** ಸಾರ್ವಜನಿಕರಿಗೆ, ಅದರಲ್ಲೂ ಗ್ರಾಮೀಣ ಭಾಗದ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಾ ಸೂಚಿಸಿದರು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಜಲ ಜೀವನ್ ಮಿ ನ್ ಯೋಜನೆಯಡಿ ಪ್ರತಿ ಮನೆಗೆ ನಲ್ಲಿಯ ಸಂಪರ್ಕ ಕಲ್ಪಿಸಿ, ನೀರು ಪೂರೈಕೆ ಮಾಡಲಾಗುತ್ತದೆ. ವಿವಿಧ ತಾಂತ್ರಿಕ ಕಾರಣಗಳಿಂದ ಕಾಮಗಾರಿ ಅಪೂರ್ಣಗೊಂಡಿದ್ದಲ್ಲಿ ತ್ವರಿತವಾಗಿ ಪೂರ್ಣಗೊಳಿಸಿ ಸಮರ್ಪಕವಾಗಿ ನೀರು ಸರಬರಾಜು ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

**ಮುಂಬರುವ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳಿಗೆ ರೈತರಿಗೆ ಯಾವುದೇ** ಅಡಚಣೆಯಿಲ್ಲದ ರಸಗೊಬ್ಬರವನ್ನು ಪೂರೈಸುವುದು ಅಧಿಕಾರಿಗಳ ಕರ್ತವ್ಯ ಎಂದು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳ ಪೂರ್ವ ಸಿದ್ಧತೆ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಸಗೊಬ್ಬರ ಪೂರೈಕೆ ಮಾಡುವ ಕಂಪನಿಗಳು ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟ ಮಾಡಿ ಕೃತಕ ಅಭಾವ ಸೃಷ್ಟಿಸಬಾರದು ಎಂದು ಎಚ್ಚರಿಕೆ ನೀಡಿದ್ದಾರೆ. ಜೈವಿಕ ಗೊಬ್ಬರವನ್ನು ರೈತರು ಹೆಚ್ಚಾಗಿ ಬಳಸಲು ತಿಳಿಸಿದ ಅವರು, ಕಡಿಮೆ ಖರ್ಚಿನಲ್ಲಿ ನೈಸರ್ಗಿಕ ಗೊಬ್ಬರ ತಯಾರಿಸಬಹುದಾಗಿದೆ ಎಂದರು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- **ದಾವಣಗೆರೆ ಹಾಗೂ ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ಮತದಾನ ಆರಂಭ.**

- **ಕಂದಾಯ ಇಲಾಖೆ ಅಧಿಕಾರಿಗಳು ತಮ್ಮ ಹಂತದಲ್ಲಿಯೇ ಜನರ ಸಮಸ್ಯೆಗಳನ್ನು ಬಗೆಹರಿಸಬೇಕು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೂಚನೆ.**

- **ರಾಜ್ಯದಲ್ಲಿ ಪ್ರತ್ಯೇಕ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಸಚಿವಾಲಯ ಸ್ಥಾಪನೆಗೆ ಸರ್ಕಾರದ ನಿರ್ಧಾರ.**

- **ಪ್ರಸಕ್ತ ಸಾಲಿನ ಪಿಯುಸಿ ಪರೀಕ್ಷೆ–1ರ ಫಲಿತಾಂಶ, ಇಂದು ಮಧ್ಯಾಹ್ನ 3 ಗಂಟೆಗೆ ಪ್ರಕಟ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******